**All India Radio: Bangalore**
**National Bulletin In Kannada**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**16.05.2026 19.35 hrs**

**<>><><*><><<>**

ಮುಖ್ಯಾಂಶಗಳು

**೧. ನೆದರ್‌ಲೆಂಡ್‌ನಲ್ಲಿ ಭಾರತೀಯ ಸಮುದಾಯ ಉದ್ದೇಶಿಸಿ ಪ್ರಧಾನಿ ನರೇಂದ್ರ ಮೋದಿ ಭಾಷಣ**

**೨. ನೀಟ್ ಯುಜಿ-೨೦೨೬ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣ; ಸಿಬಿಐ ನಿಂದ ಪ್ರಮುಖ ಆರೋಪಿ ಬಂಧನ**

**೩. ಬೆಂಗಳೂರಿನ ಯಲಹಂಕದಲ್ಲಿ ರೈಲ್ವೆ ಮೆಗಾ ಕೋಚಿಂಗ್ ಟರ್ಮಿನಲ್ ನಿರ್ಮಾಣ - ಕೇಂದ್ರ ಸಚಿವ ವಿ.ಸೋಮಣ್ಣ**

**೪. ಥೈಲೆಂಡ್ ಓಪನ್ ಬ್ಯಾಡ್ಮಿಂಟನ್; ಫೈನಲ್ ಪ್ರವೇಶಿಸಿದ ಭಾರತದ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ- ಚಿರಾಗ್ ಶೆಟ್ಟಿ ಜೋಡಿ**

**೫. ಐಪಿಎಲ್ ಟಿ-೨೦ ಕ್ರಿಕೆಟ್: ಕೋಲ್ಕತ್ತಾ ನೈಟ್ ರೈಡರ್ಸ್ ವಿರುದ್ಧ ಟಾಸ್ ಗೆದ್ದ ಗುಜರಾತ್ ಟೈಟನ್ಸ್ ಫೀಲ್ಡಿಂಗ್ ಆಯ್ಕೆ**

**<>><><*><><<>**

ಐದು ರಾಷ್ಟ್ರಗಳ ಪ್ರವಾಸದಲ್ಲಿರುವ ಪ್ರಧಾನಿ ನರೇಂದ್ರ ಮೋದಿ ಅವರು ನೆದರ್‌ಲೆಂಡ್‌ನಲ್ಲಿ ಭಾರತೀಯ ಸಮುದಾಯವನ್ನುದ್ದೇಶಿಸಿ ಮಾತನಾಡಿದರು. 'ದಿ ಹೇಗ್' ನಲ್ಲಿ ನಡೆದ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ, ಈ ಸಮಾರಂಭ ಭಾರತ-ನೆದರ್‌ಲೆಂಡ್ ನಡುವಿನ ಸ್ನೇಹದ ಜೀವಂತ ಸಂಕೇತವಾಗಿದೆ. ನೆದರ್‌ಲೆಂಡ್‌ನ ಸಮಾಜ ಮತ್ತು ಆರ್ಥಿಕತೆಯನ್ನು ಬಲಪಡಿಸುವಲ್ಲಿ ವಲಸಿಗರ ಪಾತ್ರದ ಬಗ್ಗೆ ಪ್ರತಿಯೊಬ್ಬ ಭಾರತೀಯರು ಹೆಮ್ಮೆಪಡುತ್ತಾರೆ ಎಂದು ಹೇಳಿದರು. ಕೋಟ್ಯಂತರ ಭಾರತೀಯರ ನಂಬಿಕೆ ಮತ್ತು ಬೆಂಬಲವು ರಾಷ್ಟ್ರಕ್ಕಾಗಿ ಅವಿಶ್ರಾಂತವಾಗಿ ಕೆಲಸ ಮಾಡಲು ತಮ್ಮನ್ನು ಪ್ರೇರೇಪಿಸುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು. ನೆದರ್‌ಲೆಂಡ್‌ಗೆ ಭೇಟಿ ನೀಡಿ ನಂತರ ಪ್ರಧಾನಿ, ತಮ್ಮ ಐದು ರಾಷ್ಟ್ರಗಳ ಪ್ರವಾಸದ ಮೂರನೇ ಹಂತದಲ್ಲಿ ನಾಳೆ ಸ್ವೀಡನ್‌ನ ಗೋಥೆನ್‌ಬರ್ಗ್‌ಗೆ ಪ್ರಯಾಣಿಸಲಿದ್ದಾರೆ.

ಅವರು ಸ್ವಿಡನ್ ಪ್ರಧಾನಿ ಉಲ್ಫ್ ಕ್ರಿಸ್ಟರ್ಸನ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆಗಳನ್ನು ನಡೆಸಲಿದ್ದಾರೆ. ಯುರೋಪಿಯನ್ ಆಯೋಗದ ಅಧ್ಯಕ್ಷೆ ಉರ್ಸುಲಾ ವಾನ್ ಡೆರ್ ಲೇಯೆನ್ ಹಾಗೂ ಯುರೋಪಿಯನ್ ರೌಂಡ್ ಟೇಬಲ್ ಫಾರ್ ಇಂಡಸ್ಟ್ರಿ ಸದಸ್ಯರನ್ನುದ್ದೇಶಿಸಿ ಅವರು ಮಾತನಾಡಲಿದ್ದಾರೆ. ತಮ್ಮ ಭೇಟಿಯ ನಾಲ್ಕನೇ ಚರಣದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಸೋಮವಾರ ನಾರ್ವೆಗೆ ತಲುಪಲಿದ್ದು, ಮೂರನೇ ಭಾರತ-ನಾರ್ವೆ ಶೃಂಗಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಅವರು ನಾರ್ವೆ ರಾಜ ಹರಾಲ್ಡ್ ಮತ್ತು ರಾಣಿ ಸೋಂಜಾ ಅವರನ್ನು ಭೇಟಿ ಮಾಡಲಿದ್ದಾರೆ. ನಾರ್ವೆ ಪ್ರಧಾನಿ ಜೋನಾಸ್ ಗಹರ್ ಸ್ಟೋರೆ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ನಾರ್ವೆ ಪ್ರಧಾನಿಯೊಂದಿಗೆ ಭಾರತ-ನಾರ್ವೆ ವ್ಯವಹಾರ ಮತ್ತು ಸಂಶೋಧನಾ ಶೃಂಗಸಭೆಯನ್ನು ಉದ್ದೇಶಿಸಿ ಪ್ರಧಾನಿ ನರೇಂದ್ರ ಮೋದಿ ಮಾತನಾಡಲಿದ್ದಾರೆ. ಶೃಂಗಸಭೆಯು ನಾರ್ವೆ ದೇಶಗಳೊಂದಿಗೆ ಭಾರತದ ಸಂಬಂಧದಲ್ಲಿ ವಿಶೇಷವಾಗಿ ತಂತ್ರಜ್ಞಾನ ಮತ್ತು ನಾವೀನ್ಯತೆ; ಹಸಿರು ಪರಿವರ್ತನೆ ಮತ್ತು ನವೀಕರಿಸಬಹುದಾದ ಇಂಧನ, ಸುಸ್ಥಿರತೆ, ಕಡಲ ಆರ್ಥಿಕತೆ, ರಕ್ಷಣೆ, ಬಾಹ್ಯಾಕಾಶ ವಲಯದಲ್ಲಿ ವಿಭಿನ್ನ ಕಾರ್ಯತಂತ್ರದ ಆಯಾಮವನ್ನು ನೀಡುತ್ತದೆ.  ತಮ್ಮ ಭೇಟಿಯ ಕೊನೆಯ ಹಂತದಲ್ಲಿ, ಪ್ರಧಾನಿ ನರೇಂದ್ರ ಮೋದಿ ಅವರು ಮಂಗಳವಾರ ಇಟಲಿ ತಲುಪಲಿದ್ದಾರೆ. ಅವರು ಇಟಲಿ ಅಧ್ಯಕ್ಷ ಸೆರ್ಗಿಯೊ ಮಟ್ಟರೆಲ್ಲಾ ಅವರನ್ನು ಭೇಟಿ ಮಾಡಲಿದ್ದಾರೆ ಮತ್ತು ಪ್ರಧಾನಿ ಜಾರ್ಜಿಯಾ ಮೆಲೋನಿ ಅವರೊಂದಿಗೆ ಮಾತುಕತೆ ನಡೆಸಲಿದ್ದಾರೆ.

**<>><><*><><<>**

ನೀಟ್-ಯುಜಿ ೨೦೨೪ರ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣದಲ್ಲಿ ಜೀವಶಾಸ್ತ್ರ ವಿಷಯದ ಪ್ರಶ್ನೆಗಳ ಸೋರಿಕೆಗೆ ಸಂಬಂಧಿಸಿದಂತೆ ಕೇಂದ್ರ ತನಿಖಾ ದಳ-ಸಿಬಿಐ ಇಂದು ಪ್ರಮುಖ ಆರೋಪಿಯನ್ನು ಬಂಧಿಸಿದೆ. ಮಹಾರಾಷ್ಟ್ರದ ಪುಣೆಯ ಹಿರಿಯ ಸಸ್ಯಶಾಸ್ತ್ರ ಶಿಕ್ಷಕರಾದ ಮನೀಶಾ ಗುರುನಾಥ್ ಬಂಧಿತ ಆರೋಪಿ. ಇವರು ನೀಟ್ ಯುಜಿ-೨೦೨೪ ಪರೀಕ್ಷಾ ಪ್ರಕ್ರಿಯೆಯಲ್ಲಿ ಭಾಗಿಯಾಗಿದ್ದರು ಮತ್ತು ರಾಷ್ಟ್ರೀಯ ಪರೀಕ್ಷಾ ಸಂಸ್ಥೆಯಿಂದ ತಜ್ಞರಾಗಿ ನೇಮಕಗೊಂಡಿದ್ದರು ಎಂದು ಸಿಬಿಐ ತಿಳಿಸಿದೆ. ಈ ತಿಂಗಳ ೧೪ ರಂದು ಬಂಧಿಸಲ್ಪಟ್ಟ ಪುಣೆಯ ಮನೀಷಾ ವಾಗ್ಮಾರೆ ಮೂಲಕ ಇವರು, ನೀಟ್ ಪರೀಕ್ಷಾ ಅಭ್ಯರ್ಥಿಗಳನ್ನು ಸಜ್ಜುಗೊಳಿಸಿದ್ದರು ಮತ್ತು ಅವರ ಪುಣೆ ನಿವಾಸದಲ್ಲಿ ಈ ವಿದ್ಯಾರ್ಥಿಗಳಿಗೆ ವಿಶೇಷ ತರಗತಿಗಳನ್ನು ನಡೆಸಿದ್ದರು ಎಂದು ಸಿಬಿಐ ಮಾಹಿತಿ ನೀಡಿದೆ. ಈ ಪ್ರಕರಣದಲ್ಲಿ ಇದುವರೆಗೆ ದೆಹಲಿ, ಜೈಪುರ, ಗುರುಗ್ರಾಮ್, ನಾಸಿಕ್, ಪುಣೆ ಮತ್ತು ಅಹ್ಲಿಯಾನಗರದಿಂದ ಒಟ್ಟು ೯ ಆರೋಪಿಗಳನ್ನು ಬಂಧಿಸಲಾಗಿದೆ.

**<>><><*><><<>**

ಭಾರತೀಯ ಸಂಸ್ಥೆಗಳು 'ಆಪರೇಷನ್ ರೇಜ್‌ಪಿಲ್' ಮೂಲಕ ಮೊದಲ ಬಾರಿಗೆ ೧೮೨ ಕೋಟಿ ರೂಪಾಯಿ ಮೌಲ್ಯದ ಕ್ಯಾಪ್ಟ್‌ಗಾನ್ ಮಾದಕವಸ್ತು ವಶಪಡಿಸಿಕೊಂಡಿವೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ತಿಳಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಸಚಿವರು, ಮಾದಕವಸ್ತು ಮುಕ್ತ ಭಾರತಕ್ಕೆ ಕೇಂದ್ರ ಸರ್ಕಾರ ಸಂಕಲ್ಪ ಮಾಡಿದೆ. ಮಧ್ಯಪ್ರಾಚ್ಯದಿಂದ ಭಾರತಕ್ಕೆ ಸಾಗಾಟ ನಡೆಸುತ್ತಿದ್ದ ಮಾದಕವಸ್ತುವನ್ನು ಭಾರತೀಯ ಸಂಸ್ಥೆಗಳು ಪತ್ತೆಹಚ್ಚಿದ್ದು, ಈ ಸಂಬಂಧ ವಿದೇಶಿ ಪ್ರಜೆಯನ್ನು ಬಂಧಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

<>><><*><><<>

ಪಾಕಿಸ್ತಾನ, ಭಯೋತ್ಪಾದಕರಿಗೆ ಆಶ್ರಯ ನೀಡುವುದನ್ನು ಮತ್ತು ಭಾರತದ ವಿರುದ್ಧ ಕಾರ್ಯಾಚರಣೆ ನಡೆಸುವುದನ್ನು ನಿಲ್ಲಿಸಬೇಕು ಎಂದು ಭಾರತೀಯ ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ ಎಚ್ಚರಿಸಿದ್ದಾರೆ. ನವದೆಹಲಿಯಲ್ಲಿ ನಡೆದ ಸೇನಾ ಸಂವಾದದಲ್ಲಿ ಮಾತನಾಡಿದ ಅವರು, ಭಾರತದ ವಿರುದ್ಧ ಪಾಕಿಸ್ತಾನ ತನ್ನ ಚಟುವಟಿಕೆಗಳನ್ನು ಮುಂದುವರಿಸಿದರೆ, ಭೌಗೋಳಿಕತೆ ಅಥವಾ ಇತಿಹಾಸದ ಭಾಗವಾಗಲು ಆ ದೇಶ ಬಯಸುತ್ತದೆಯೇ ಎಂಬುದನ್ನು ಪಾಕಿಸ್ತಾನ ನಿರ್ಧರಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆ.

<>><><*><><<>

ಗ್ರೇಟರ್ ಬೆಂಗಳೂರು ಪ್ರಾಧಿಕಾರ ಮತ್ತು ನೈರುತ್ಯ ರೈಲ್ವೆ ಬೆಂಗಳೂರು ವಿಭಾಗದ ಅಧಿಕಾರಿಗಳೊಂದಿಗೆ ರೈಲ್ವೆ ಮತ್ತು ಜಲಶಕ್ತಿ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಬೆಂಗಳೂರಿನಲ್ಲಿಂದು ಸಭೆ ನಡೆಸಿದರು. ಈ ವೇಳೆ ಮಾತನಾಡಿದ ಸಚಿವ ವಿ.ಸೋಮಣ್ಣ, ಬೆಂಗಳೂರಿನ ಯಲಹಂಕದಲ್ಲಿ ರೈಲ್ವೆ ಮೆಗಾ ಕೋಚಿಂಗ್ ಟರ್ಮಿನಲ್ ನಿರ್ಮಿಸುವ ಯೋಜನೆ ಕೈಗೆತ್ತಿಕೊಳ್ಳಲಾಗಿದ್ದು, ಈ ಬಗ್ಗೆ ಕ್ರಿಯಾ ಯೋಜನೆ ರೂಪಿಸಲಾಗುತ್ತಿದೆ. ಮೆಗಾ ಕೋಚಿಂಗ್ ಟರ್ಮಿನಲ್ ನಲ್ಲಿ ೧೬ ರಿಂದ ೧೭ ಪ್ಲಾಟ್‌ಫಾರಂಗಳು ಇರಲಿದ್ದು, ನೆಲ ಮಹಡಿ, ಮೊದಲ ಮತ್ತು ಎರಡನೇ ಮಹಡಿಗಳಲ್ಲಿ ರೈಲು ಕೋಚ್‌ಗಳಿಗೆ ಸಂಬಂಧಿಸಿದ ಕಾರ್ಯಗಳು ನಡೆಯಲಿವೆ. ಈ ಯೋಜನೆಗೆ ಅಗತ್ಯವಾದ ಸ್ಥಳದ ಅವಶ್ಯಕತೆ ಇದ್ದು, ಈ ಬಗ್ಗೆ ರಾಜ್ಯ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

<>><><*><><<>

ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಇದೇ ೧೯ ಮತ್ತು ೨೦ ರಂದು ಚೀನಾಗೆ ಎರಡು ದಿನಗಳ ಪ್ರವಾಸ ಕೈಗೊಳ್ಳಲಿದ್ದು, ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರನ್ನು ಭೇಟಿಯಾಗಲಿದ್ದಾರೆ. ಚೀನಾ-ರಷ್ಯಾ ಸ್ನೇಹ ಒಪ್ಪಂದದ ೨೫ನೇ ವಾರ್ಷಿಕೋತ್ಸವ ಸಂದರ್ಭದಲ್ಲಿ ಉಭಯ ನಾಯಕರು

ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಈ ವೇಳೆ, ಪ್ರಮುಖ ಅಂತಾರಾಷ್ಟ್ರೀಯ ಮತ್ತು ಪ್ರಾದೇಶಿಕ ಸಮಸ್ಯೆಗಳು ಹಾಗೂ ಆರ್ಥಿಕ ಸಹಕಾರಗಳಲ್ಲಿ ಚರ್ಚೆ ನಡೆಯಲಿವೆ ಎಂದು ಕ್ರೆಮ್ಲಿನ್ ತಿಳಿಸಿದೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಚೀನಾಗೆ ಭೇಟಿ ನೀಡಿದ ೨೪ ಗಂಟೆಗಳ ಒಳಗೆ ರಷ್ಯಾದಿಂದ ಈ ಘೋಷಣೆ ಹೊರಬಿದ್ದಿದೆ.

<>><><*><><<>

ಈ ವರ್ಷದ ಜನವರಿ ತಿಂಗಳಲ್ಲಿ ಕೈಗೊಂಡ ಭಾರತ-ಐರೋಪ್ಯ ಒಕ್ಕೂಟಗಳ ಅಂತಿಮ ಮುಕ್ತ ವ್ಯಾಪಾರ ಒಪ್ಪಂದವು ಹೂಡಿಕೆ, ವ್ಯಾಪಾರ ಮತ್ತು ತಂತ್ರಜ್ಞಾನ ಸಹಕಾರಕ್ಕೆ ಭಾರತ ಮತ್ತು ಯೂರೋಪ್ ದೇಶಗಳ ನಡುವೆ ಹೊಸ ಅವಕಾಶಗಳನ್ನು ತೆರೆಯಲಿವೆ ಎಂದು ನಿರೀಕ್ಷಿಸಲಾಗಿದೆ. ಈ ವ್ಯಾಪಾರ ಒಪ್ಪಂದದಿಂದ ಉಂಟಾಗಬಹುದಾದ ಸಾಧ್ಯತೆಗಳ ಬಗ್ಗೆ ಮಾತನಾಡಿರುವ ಸ್ವೀಡನ್‌ನಲ್ಲಿರುವ ಆರ್ಟೆಫೆಕ್ಸ್ ಕಂಪನಿಯ ಎಂಜಿನಿಯರಿಂಗ್ ಮತ್ತು ಉತ್ಪನ್ನ ಅಭಿವೃದ್ಧಿಯ ಮುಖ್ಯಸ್ಥರಾದ ಸ್ಟೆನ್‌ಫೆಲ್ಟ್, ಭಾರತ ಹಾಗೂ ಐರೋಪ್ಯ ರಾಷ್ಟ್ರಗಳ ನಡುವೆ ಔದ್ಯೋಗಿಕ ಒಡಂಬಡಿಕೆ ಮತ್ತು ಹೆಚ್ಚುವರಿ ವ್ಯಾಪಾರ ಅವಕಾಶಗಳು ದೊರೆಯಲಿದೆ ಎಂದು ಆಶಯ ವ್ಯಕ್ತಪಡಿಸಿದ್ದಾರೆ. ಭಾರತದ ಉತ್ಪಾದನೆ ಮತ್ತು ನಾವೀನ್ಯತಾ ಪರಿಸರದ ಬಗ್ಗೆ ಯೂರೋಪಿನ್ ಕಂಪನಿಗಳ ಮೇಲೆ ವಿಶ್ವಾಸ ವೃದ್ಧಿಸುತ್ತಿದೆ ಎಂದು ತಿಳಿಸಿದ್ದಾರೆ. ಆಟೋಮೊಬೈಲ್ ಎಂಜಿನಿಯರಿಂಗ್ ಕ್ಷೇತ್ರದಲ್ಲಿ ಹಸಿರು ತಂತ್ರಜ್ಞಾನ ಮತ್ತು ಅಭಿವೃದ್ಧಿ ಹೊಂದಿದಂತಹ ಉತ್ಪಾದನಾ ವಲಯದಲ್ಲಿ ಭಾರತ - ಐರೋಪ್ಯ ರಾಷ್ಟ್ರಗಳ ಸಹಕಾರ ಇದರಿಂದ ಮತ್ತಷ್ಟು ಗಟ್ಟಿಗೊಳ್ಳಲಿದೆ ಎಂದು ಔದ್ಯೋಗಿಕ ವಲಯದ ಪರಿಣಿತರು ಅಭಿಪ್ರಾಯಪಟ್ಟಿದ್ದಾರೆ.

<>><><*><><<>

ತ್ರಿಪುರಾದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಬಲಪಡಿಸುವ ಮಹತ್ವದ ಕ್ರಮವಾಗಿ ಕೇಂದ್ರ ಗೃಹ ಸಚಿವಾಲಯ, ಹೆಚ್ಚುವರಿ ಭಾರತೀಯ ಮೀಸಲು ಪಡೆ ರಚಿಸಲು ಅಧಿಕೃತವಾಗಿ ಅನುಮೋದನೆ ನೀಡಿದೆ. ಇದರ ಸ್ಥಾಪನೆಗೆ ಕೇಂದ್ರ ಸರ್ಕಾರ, ೫೦ ಕೋಟಿ ರೂಪಾಯಿ ಮತ್ತು ಮೂಲಸೌಕರ್ಯ ಅಭಿವೃದ್ಧಿಗಾಗಿ ೩೦ ಕೋಟಿ ರೂಪಾಯಿ ಆರ್ಥಿಕ ಅನುದಾನವನ್ನು ಮಂಜೂರು ಮಾಡಿದೆ. ಈ ಹೊಸ ಘಟಕವು ಪ್ರಾಥಮಿಕವಾಗಿ ಗಲಭೆ ನಿಯಂತ್ರಣ ಕಾರ್ಯಾಚರಣೆಗಳು ಮತ್ತು ಗಡಿ ಕಾವಲುಗಳ ಮೇಲೆ ಕೇಂದ್ರೀಕರಿಸುತ್ತದೆ. ಅಗತ್ಯವಿರುವಂತೆ ದೇಶದ ಯಾವುದೇ ಭಾಗಕ್ಕೆ ಇಲ್ಲಿನ ಸಿಬ್ಬಂದಿಯನ್ನು ನಿಯೋಜಿಸುವ ಅಧಿಕಾರವನ್ನು ಕೇಂದ್ರ ಸರ್ಕಾರ ಹೊಂದಿದೆ.

<>><><*><><<>

ಬ್ಯಾಂಕಾಕ್‌ನಲ್ಲಿ ಇಂದು ನಡೆದ ಥೈಲೆಂಡ್ ಓಪನ್ ಬ್ಯಾಡ್ಮಿಂಟನ್ ಪಂದ್ಯಾವಳಿಯ ಪುರುಷರ ಡಬಲ್ಸ್ ವಿಭಾಗದ ಸೆಮಿಫೈನಲ್‌ನಲ್ಲಿ ಮಲೇಷಿಯಾದ ಗೋ ಸ್ಜೆ ಫೀ ಮತ್ತು ನೂರ್ ಇಜುದ್ದೀನ್ ಅವರನ್ನು ಸೋಲಿಸುವ ಮೂಲಕ ಭಾರತದ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಫೈನಲ್ ಪ್ರವೇಶಿಸಿದ್ದಾರೆ. ೮೨ ನಿಮಿಷಗಳ ಪಂದ್ಯದಲ್ಲಿ ಭಾರತದ ಈ ಜೋಡಿ, ೧೯-೨೧, ೨೨-೨೦ ಮತ್ತು ೨೧-೧೬ ಅಂತರದಲ್ಲಿ ಮಲೇಷಿಯಾ ಜೋಡಿಯನ್ನು ಪರಾಭವಗೊಳಿಸಿತು.

**<>><><*><><<>**

ಕೋಲ್ಕತ್ತಾದ ಈಡನ್ ಗಾರ್ಡನ್ಸ್‌ನಲ್ಲಿ ನಡೆಯುತ್ತಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಕೋಲ್ಕತ್ತಾ ನೈಟ್ ರೈಡರ್ಸ್ ಹಾಗೂ ಗುಜರಾತ್ ಟೈಟನ್ಸ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಗುಜರಾತ್ ಟೈಟನ್ಸ್ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ ><><<>**